ಮಾಧ್ಯಮ ಮಾಹಿತಿ:

ಮಾನ್ಯ ಆಡಳಿತಗಾರರು ರವರಿಂದ ರಸ್ತೆ ಗುಂಡಿ, ಬೀದಿ ದೀಪ ಅಳವಡಿಗೆ, ಯಾಂತ್ರಿಕ ಕಸ ಗುಡಿಸುವ ಯಂತ್ರ ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಕುರಿತು ಸಭೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಮೂಲಭೂತ ಸೌಕರ್ಯವಿಭಾಗದಿಂದ ರಸ್ತೆ ಗುಂಡಿ, ಬೀದಿ ದೀಪ ಅಳವಡಿಗೆ, ಯಾಂತ್ರಿಕ ಕಸ ಗುಡಿಸುವ ಯಂತ್ರ ಹಾಗೂ ವಾರ್ಷಿಕ ರಸ್ತೆ ನಿರ್ವಹಣೆ ಕುರಿತು ಮಾನ್ಯ ಆಡಳಿತಗಾರರು ರವರು ಇಂದು ಸಂಬಂಧಪಟ್ಟ ಅಧಿಕಾರಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರು ಶ್ರೀ ಎಂ.ಆರ್.ವೆಂಕಟೇಶ್, ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಮುಖ್ಯ ಅಭಿಯಂತರರು ಶ್ರೀ ಪ್ರಹ್ಲಾದ್, ಯೋಜನಾ ವಿಭಾಗದ ಮುಖ್ಯ ಅಭಿಯಂತರರು ಶ್ರೀ ರಮೇಶ್, ಎಲ್ಲಾ ವಲಯ ಮುಖ್ಯ ಅಭಿಯಂತರರುಗಳು, ಕಾರ್ಯ ಪಾಲಕ ಅಭಿಯಂತರರುಗಳು(ರಸ್ತೆ ಮೂಲಭೂತ ಸೌಕರ್ಯ) ಹಾಗೂ ಇನ್ನಿತರೆ ಸಂಬಂಧಪಸಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ರಸ್ತೆ ಗುಂಡಿ ಮುಚ್ಚುವ ಬಗ್ಗೆ:

ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ ಬಹುತೇಕ ಕಡೆ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ. ಆದರೆ, ಅದಕ್ಕೆ ಇನ್ನೂ ವೇಗ ನೀಡಿ ಗುಣಮಟ್ಟ ಮತ್ತು ಪ್ರಮಾಣ ಸರಿಯಾಗಿರುವಂತೆ ನೋಡಿಕೊಂಡು ನಿಗದಿತ ಸಮಯಲ್ಲಿ ಗುಂಡಿಗಳನ್ನು ಮುಚ್ಚಲು ಕ್ರಮವಹಿಸಬೇಕು. ಈ ಸಂಬಂಧ ನಾಳೆಯಿಂದಲೇ ಡಾಂಬರು ಮಿಶ್ರಣ ಘಟಕ(ಹಟ್ ಮಿಕ್ಸ್ ಪ್ಲಾಂಟ್)ದಿಂದ ಎಲ್ಲಾ 8 ವಲಯಗಳಿಗೂ ಪ್ರತಿ ನಿತ್ಯ ಎರಡೆರಡು ಲೋಡ್‌ಗಳು ಕಳುಹಿಸಿ 10 ದಿನಗಳೊಳಗಾಗಿ ಉಳಿದೆಲ್ಲಾ ಗುಂಡಿಗಳನ್ನು ಮುಚ್ಚಬೇಕು ಎಂದು ಆಡಳಿತಗಾರರು ಎಲ್ಲಾ ವಲಯ ಮುಖ್ಯ ಅಭಿಯಂತರರುಗಳಿಗೆ ಸೂಚನೆ ನೀಡಿದರು.

ಬೀದಿ ದೀಪಗಳ ಅಳವಡಿಕೆ:

ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಕಾರ್ಯವು ಅಪೇಕ್ಷಿತ ಮಟ್ಟದಲ್ಲಿ ನಿರ್ವಹಿಸುತ್ತಿಲ್ಲವಾದ್ದರಿಂದ, ಟೆಂಡರ್ ಪ್ರಕ್ರಿಯೆಗೆ ವೇಗೆ ನೀಡಿ ಬೀದಿ ದೀಪಗಳ ನಿರ್ವಹಣೆಗೆ ತ್ವರಿತವಾಗಿ ಕಾರ್ಯಾದೇಶ ನೀಡಬೇಕೆಂದು ಆಡಳಿತಗಾರರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೊತೆಗೆ ಬೀದಿ ದೀಪ ಅಳವಡಿಸುವ ಸಂಬಂಧ ಆಯಾ ವಲಯ ಮುಖ್ಯ ಅಭಿಯಂತರರುಗಳು ಆ ಬಗ್ಗೆ ಹೆಚ್ಚು ಗಮನವರಿಸಬೇಕು ಎಂದು ಸೂಚನೆ ನೀಡಿದರು.

ಯಾಂತ್ರಿಕ ಕಸ ಗುಡಿಸುವ ಯಂತ್ರ:

ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಲು ಹಾಗೂ ಅದರ ಮೇಲೆ ಕಾರ್ಯಪಾಲಕ ಅಭಿಯಂತರರು(ರಸ್ತೆ

ಮೂಲಭೂತ ಸೌಕರ್ಯ) ರವರು ನಿಗಾವಹಿಸುವ ಮೂಲಕ ನಗರದ ಪ್ರಮುಖ, ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಪೈಕಿ ಯಾವ ಯಾವ ರಸ್ತೆಗಳಲ್ಲಿ ಯಾಂತ್ರಿಕ ಕಸ ಗುಡಿಸುವ ಯಂತ್ರಗಳು ಕಾರ್ಯನಿರ್ವಹಿಸುತ್ತಿವೆ ಎಂಬುದನ್ನು ಪಟ್ಟಿ ಮಾಡಿ ಪ್ರತಿ ನಿತ್ಯ ಎಷ್ಟು ಕಿ.ಮೀ ಕಸ ಗುಡಿಸುತ್ತಿವೆ ಎಂಬ ವರದಿಯನ್ನು ತಯಾರಿಸಲು ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಾರ್ಷಿಕ ರಸ್ತೆ ನಿರ್ವಹಣೆ:

ಪಾಲಿಕೆ ವ್ಯಾಪ್ತಿಯ ಆರ್ಟೀರಿಯಲ್ ಹಾಗೂ ಸಬ್ ಆರ್ಟೀರಿಯಲ್ ರಸ್ತೆಗಳ ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ಟೆಂಡರ್ ಆಹ್ವಾನಿಸಿದ್ದು, ಟೆಂಡರ್ ಪ್ರಕ್ರಿಯೆಯನ್ನು ತ್ವರಿತಗೊಳಿಸಿ, ನಿರ್ವಹಣೆ ಕಾರ್ಯವನ್ನು ಪ್ರಾರಂಭಿಸಲು ಸೂಚನೆ ನೀಡಿದರು. ಇದೇ ರೀತಿ ಪ್ರಮುಖ ಆರ್ಟೀರಿಯಲ್ ರಸ್ತೆಗಳಲ್ಲಿ ಕರ್ಬ್ ಸ್ಟೋನ್‌ಗಳಿಗೆ ಬಣ್ಣ ಬಳಿಯುವ ಹಾಗೂ ಲೈನ್ ಮಾರ್ಕಿಂಗ್ ಮಾಡುವ ಸಂಬಂಧ ಯೋಜನೆಯನ್ನು ರೂಪಿಸಿ ಸಮರೋಪಾದಿಯಲ್ಲಿ ಕೆಲಸ ಮಾಡಲು ಸೂಕ್ತಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.